## ಕರ್ನಾಟಕ ಸರ್ಕಾರ

ಸಂಖ್ಯೆ : ಕಂಇ 158 ಟಿಎನ್‌ಆರ್ 2020

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:01-05-2021

## ಆದೇಶ

1) ಆದೇಶ ಸಂಖ್ಯೆ : ಕಂಇ 158 ಟಿಎನ್‌ಆರ್ 2020, ದಿನಾಂಕ: 29-4-2021 ಸೇರ್ಪಡೆ – 4 ನ್ನು ಮುಂದುವರೆಸುತ್ತಾ ಕೋವಿಡ್-19 ಸಾಂಕ್ರಾಮಿಕ ಸೋಂಕು ತಡೆಗಟಗಟ್ಟಲು ಹೊರಡಿಸಿರುವ ಮಾರ್ಗಸೂಚಿಯಲ್ಲಿ ಪರಿಷ್ಕರಿಸಿ ವಿಪತ್ತು ನಿರ್ವಹಣೆ ಕಾಯ್ದೆ 2005 ರಲ್ಲಿನ ಸೆಕ್ಷನ್ 24 ರಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ರಾಜ್ಯ ಕಾರ್ಯಕಾರಿ ಸಮಿತಿ ಅದ್ಯಕ್ಷರ ನಿರ್ದೇಶನದಂತೆ ಈ ಕೆಳಕಂಡಂತೆ ಆದೇಶಿಸಿದೆ.

2) ಪ್ರಸ್ತುತ ಮಾರುಕಟ್ಟೆಯಲ್ಲಿ ಆಗುತ್ತಿರುವ ಜನಸಂದಣಿ/ನೂಕು ನುಗ್ಗಲುಗಳನ್ನು ತಪ್ಪಿಸಲು ದಿನಾಂಕ:2-5-2021 ರಿಂದಲೇ ಅನ್ವಯವಾಗುವಂತೆ ಎಲ್ಲಾ ರೀತಿಯ ಸಂತೆ, ವಾರದ ಸಂತೆಗಳನ್ನು ನಿರ್ಬಂಧಿಸಲಾಗಿದೆ. ಇದರ ಬದಲಿಗೆ ಬೆಳಿಗ್ಗೆ 6.00 ಗಂಟೆಯಿಂದ ಸಂಜೆ 6.00 ಗಂಟೆಯವರೆಗೂ ಹಾಪ್‌ಕಾಮ್ಸ್, ಎಲ್ಲಾ ಹಾಲಿನ ಬೂತುಗಳು, ತಳ್ಳುವಗಾಡಿ ಮೂಲಕ ಹಣ್ಣು ತರಕಾರಿಗಳನ್ನು ದುಬಾರಿ ಬೆಲೆಗೆ ಮಾರಾಟ ಮಾಡದೆ, ಮಾರುಕಟ್ಟೆ ಬೆಲೆಗೆ ಮಾರಾಟ ಮಾಡುವುದು ಹಾಗೂ ಕೋವಿಡ್-19 ನಿಯಮಗಳನ್ನು ಪಾಲಿಸುವುದರೊಂದಿಗೆ ಅನುಮತಿಸಲಾಗಿದೆ. ಎಪಿಎಂಸಿ ಹಾಗೂ ದಿನಸಿ ಅಂಗಡಿಗಳನ್ನು ಬೆಳಿಗ್ಗೆ 6.00 ರಿಂದ ಮಧ್ಯಾಹ್ನ 12.00 ಗಂಟೆಯವರೆಗೆ ಮಾತ್ರ ತೆರೆಯಲು ಅನುಮತಿಸಿದೆ.

3) ಈ ಆದೇಶವನ್ನು ಮುಖ್ಯ ಆಯುಕ್ತರು, ಬಿಬಿಎಂಪಿ, ಪೊಲೀಸ್ ಆಯುಕ್ತರು, ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು, ಪೊಲೀಸ್ ವರಿಷ್ಠಾಧಿಕಾರಿಗಳು, ಇಲಾಖೆಗಳ ಮುಖ್ಯಸ್ಥರು ಹಾಗೂ ಸಂಬಂಧಿಸಿದ ಪ್ರಾಧಿಕಾರಗಳು ಕಟ್ಟುನಿಟ್ಟಾಗಿ ಅನುಷ್ಠಾನಗೊಳಿಸತಕ್ಕದ್ದು.

(ಎನ್.ಮಂಜುನಾಥ ಪ್ರಸಾದ್, ಭಾ.ಆ.ಸೇ) 1/5/2021
ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಹಾಗೂ,
ಸದಸ್ಯ ಕಾರ್ಯದರ್ಶಿ, ಕರ್ನಾಟಕ ರಾಜ್ಯ
ವಿಪತ್ತು ನಿರ್ವಹಣಾ ಪ್ರಾಧಿಕಾರದ ಕಾರ್ಯಕಾರಿ ಸಮಿತಿ.

ಇವರಿಗೆ,

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ ಬೆಂಗಳೂರು.